# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)ಪಿಆರ್/ 62 /2020-21

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 3/3/21

## ಸುತ್ತೋಲೆ

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳಿಗೆ ನಿವೃತ್ತಿ ಹೊಂದುವ ದಿನದಂದೇ ಸಲ್ಲಬೇಕಾದ ನಿವೃತ್ತಿ ಸೌಲಭ್ಯಗಳನ್ನು ನೀಡುವ ಬಗ್ಗೆ.

* * * * *

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳಿಗೆ ನಗರ ಪಾಲಿಕೆಯ ಸೇವೆಯಿಂದ ವಯೋನಿವೃತ್ತಿ ಹೊಂದುವ ದಿನದಂದೇ ಎಲ್ಲಾ ಆರ್ಥಿಕ ಸೌಲಭ್ಯಗಳ ಚೆಕ್ಕನ್ನು ಅವರು ಪಾಲಿಕೆಯಲ್ಲಿ ಸಲ್ಲಿಸಿದ ಸೇವೆಗೆ ಗೌರವವನ್ನು ಸಲ್ಲಿಸಿ ವಿತರಿಸದೇ ಇರುವುದು ಗಮನಕ್ಕೆ ಬಂದಿರುತ್ತದೆ.

ಇದು ವಿಷಾದನೀಯ ಸಂಗತಿಯಾಗಿದ್ದು, ಇನ್ನು ಮುಂದೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ಬಟವಾಡೆ ಅಧಿಕಾರಿಗಳು ತಮ್ಮ ತಮ್ಮ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳು ಪಾಲಿಕೆಯ ಸೇವೆಯಿಂದ ವಯೋನಿವೃತ್ತಿ ಹೊಂದುವ 6 ತಿಂಗಳ ಮೊದಲೇ ನಿವೃತ್ತಿ ಕಛೇರಿ ಆದೇಶವನ್ನು ಹೊರಡಿಸಲು ಹಾಗೂ ನಿವೃತ್ತಿ ಹೊಂದುವ ಒಂದು ತಿಂಗಳ ಮುಂಚೆಯೇ ಅಂತಹ ಅಧಿಕಾರಿ / ನೌಕರರುಗಳಿಗೆ ನಿವೃತ್ತಿ ಸೌಲಭ್ಯಗಳನ್ನು ಮಂಜೂರು ಮಾಡಲು ಬೇಕಾಗಿರುವ ಎಲ್ಲಾ ದಾಖಲಾತಿಗಳನ್ನು ನಿವೃತ್ತಿ ಹೊಂದಲಿರುವ ನೌಕರರುಗಳಿಂದ ಪಡೆದು, ಕಡತಗಳನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಸಂಬಂಧಪಟ್ಟ ವಲಯ ಅಪರ / ಜಂಟಿ ಆಯುಕ್ತರುಗಳಿಂದ ನಿವೃತ್ತಿ ವೇತನವನ್ನು ಮಂಜೂರು ಮಾಡಿಸಿ, ನಿವೃತ್ತಿ ದಿನದಂದೇ ನಿವೃತ್ತಿ ಸೌಲಭ್ಯಗಳ ಚೆಕ್ಕನ್ನು ನಿವೃತ್ತ ನೌಕರರುಗಳಿಗೆ ಪಾವತಿಸುವ ಬಗ್ಗೆ ಸೂಕ್ತ ಕ್ರಮ ಜರುಗಿಸಲು ಈ ಮೂಲಕ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳಿಗೆ ಆದೇಶಿಸಲಾಗಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ವಹಿಸಲಾಗುವುದು ಹಾಗೂ ವಲಯ ಅಪರ / ಜಂಟಿ ಆಯುಕ್ತರುಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳಲ್ಲಿ ನಿವೃತ್ತಿ ಅಂಚಿನಲ್ಲಿರುವ ಅಧಿಕಾರಿ / ನೌಕರರುಗಳ ಮಾಹಿತಿಗಳನ್ನು ಪಡೆದು, ನಿವೃತ್ತಿ ಹೊಂದಲಿರುವ ಅಧಿಕಾರಿ / ನೌಕರರುಗಳಿಗೆ ನಿವೃತ್ತಿ ದಿನದಂದೇ ನಿವೃತ್ತಿ ಸೌಲಭ್ಯಗಳ ಚೆಕ್ಕನ್ನು ನಿವೃತ್ತ ನೌಕರರುಗಳಿಗೆ ಪಾವತಿಯಾಗುವಂತೆ ಉಸ್ತುವಾರಿ ಮಾಡಲು ಎಲ್ಲಾ ವಲಯಗಳ ಅಪರ / ಜಂಟಿ ಆಯುಕ್ತರುಗಳಿಗೆ ಸೂಚಿಸಲು ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರಿಂದ ನಿರ್ದೇಶಿಸಲ್ಪಟ್ಟಿರುತ್ತೇನೆ.

Office of ... Bruhat Bangalore Mahanagara ...
No. 1245
Date 4-3-2021

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಮಾನ್ಯ ಆಡಳಿತಗಾರರ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಎಲ್ಲಾ ವಿಶೇಷ ಆಯುಕ್ತರವರುಗಳ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯಗಳ ಅಪರ / ಜಂಟಿ ಆಯುಕ್ತರವರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸಿದೆ.
: ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.
: ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಮುಲೆಅ/ಮುಲೆಪ/ಎಲ್ಲಾ ವಲಯದ ಉ.ನಿ (ಹಣಕಾಸು) ರವರುಗಳಿಗೆ ಕಳುಹಿಸಿದೆ.
: ಕಛೇರಿ ಪ್ರತಿ.

IPP. SDA 04/03/04